ಕರ್ನಾಟಕ ಸರ್ಕಾರ
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ನೇವಿ-1/ಅಉಆ/97/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-01,
ದಿನಾಂಕ: 03-01-2023

# ಪ್ರಕಟಣೆ

ವಿಷಯ: 2022-23ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

* * * * * * *

2022-23ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗಿರುವ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರನ್ನು (ಗ್ರಂಥಪಾಲಕರು ಹಾಗೂ ದೈಹಿಕ ಶಿಕ್ಷಣ ಬೋಧಕರು ಒಳಗೊಂಡಂತೆ) ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆ ಮೂಲಕ ಆಯ್ಕೆ ಮಾಡಿಕೊಳ್ಳುವ ಸಂಬಂಧ ಈ ಕೆಳಕಂಡಂತೆ ಆಯ್ಕೆ ಪ್ರಕ್ರಿಯೆಯನ್ನು ನಡೆಸಲಾಗುವುದು.

## I. ತಾತ್ಕಾಲಿಕ ವೇಳಾಪಟ್ಟಿ:

| ಕ್ರ. ಸಂ. | ವಿವರ | ದಿನಾಂಕ |
|---|---|---|
| 1. | ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ | 03.01.2023 |
| 2. | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 10.01.2023 |
| 3. | ಮೆರಿಟ್ ಪಟ್ಟಿಯನ್ವಯ ಸ್ಥಳ ಆಯ್ಕೆ ಕೌನ್ಸಿಲಿಂಗ್ ನಡೆಸುವ ದಿನಾಂಕ | 16.01.2023 ರಿಂದ 25.01.2023 |
| 4. | ಸ್ಥಳ ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳು ಸಂಬಂಧಪಟ್ಟ ಕಾಲೇಜುಗಳಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳಲು ಕೊನೆಯ ದಿನಾಂಕ | 01.02.2023 |
| ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಇಲಾಖೆಯ ಅಂತರ್ಜಾಲ ತಾಣ https://dce.karnataka.gov.in | | |

## II. ಆಯ್ಕೆ ಪ್ರಕ್ರಿಯೆ:

ಈ ಕೆಳಕಂಡ ಮಾನದಂಡಗಳನ್ವಯ ಅಭ್ಯರ್ಥಿಗಳ ವಿಷಯವಾರು ಮೆರಿಟ್ ಲಿಸ್ಟ್ ಅನ್ನು (Merit List) ಪ್ರಕಟಿಸಲಾಗುವುದು.

| ಕ್ರ. ಸಂ. | ವಿದ್ಯಾರ್ಹತೆ | ಗರಿಷ್ಠ ಅಂಕಗಳು |
|---|---|---|
| 1. | <u>ವಿದ್ಯಾರ್ಹತೆ:</u><br>ಅಭ್ಯರ್ಥಿಯು ಎರಡು ವರ್ಷ ಸ್ನಾತಕೋತ್ತರ ಪದವಿಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ 25%ನ್ನು ಗಣನೆಗೆ ತೆಗೆದುಕೊಳ್ಳುವುದು.<br>*(ಉದಾ: ಅಭ್ಯರ್ಥಿಯು ಸ್ನಾತಕೋತ್ತರ ಪದವಿಯಲ್ಲಿ ಶೇಕಡ 60 ಅಂಕ ಪಡೆದಿದ್ದಲ್ಲಿ, ಅದರ ಶೇಕಡ 25ರಷ್ಟು ಭಾಗವನ್ನು ಅಂದರೆ 15 ಅಂಕಗಳು ಎಂಬುದಾಗಿ ಗಣನೆಗೆ ತೆಗೆದುಕೊಳ್ಳುವುದು).* | 25 |

......2

| | | |
|---|---|---|
| 2. | <u>ಹೆಚ್ಚುವರಿ ವಿದ್ಯಾರ್ಹತೆ:</u><br>1) ಪಿಹೆಚ್.ಡಿ ವಿದ್ಯಾರ್ಹತೆ ಪಡೆದಿದ್ದಲ್ಲಿ<br>2) ಎನ್ಇಟಿ/ಕೆ-ಸೆಟ್/ಎಸ್ಎಲ್ಇಟಿ ವಿದ್ಯಾರ್ಹತೆ ಪಡೆದಿದ್ದಲ್ಲಿ<br>3) ಎಂ.ಫಿಲ್. ವಿದ್ಯಾರ್ಹತೆ ಪಡೆದಿದ್ದಲ್ಲಿ | 12<br>09<br>06 |
| 3. | <u>ಅನುಭವ:</u><br>ಹಿಂದಿನ ವರ್ಷಗಳಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಮಾತ್ರ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಅವಧಿಗೆ ಪ್ರತಿ ಶೈಕ್ಷಣಿಕ ವರ್ಷಕ್ಕೆ 3 ಅಂಕಗಳಂತೆ ಗರಿಷ್ಠ 16 ವರ್ಷಗಳಿಗೆ 48 ಅಂಕಗಳನ್ನು ಮಿತಿಗೊಳಿಸುವುದು. *(ಪ್ರತಿ ಶೈಕ್ಷಣಿಕ ವರ್ಷದ ಪೂರ್ಣ ಅವಧಿ ಸೇವೆಗೆ 3 ಅಂಕಗಳು, ಶೈಕ್ಷಣಿಕ ವರ್ಷದಲ್ಲಿ 1 ಸೆಮಿಸ್ಟರ್ ನಲ್ಲಿ ಮಾತ್ರ ಸೇವೆ ಸಲ್ಲಿಸಿದ್ದರೆ 1.5 ಅಂಕಗಳು) (1 ತಿಂಗಳವರೆಗಿನ ಸೇವಾ ಅವಧಿಗೆ 0.5 ಅಂಕ, 1 ತಿಂಗಳು ಮೇಲ್ಪಟ್ಟು 2 ತಿಂಗಳವರೆಗಿನ ಸೇವಾ ಅವಧಿಗೆ 1 ಅಂಕ ಹಾಗೂ 2 ತಿಂಗಳು ಮೇಲ್ಪಟ್ಟು ಸೇವಾ ಅವಧಿಗೆ 1.5 ಅಂಕಗಳು)* | 48 |
| | ಒಟ್ಟು | 100 |
| | ಸೂಚನೆ: ವಿಕಲಚೇತನ ಅಭ್ಯರ್ಥಿಗಳಿಗೆ 10 ಅಂಕಗಳನ್ನು ಹೆಚ್ಚುವರಿಯಾಗಿ ನೀಡುವುದು. | |

1. ಅಭ್ಯರ್ಥಿಗಳು ಪ್ರಾಂಶುಪಾಲರಿಂದ ಹೊಸದಾಗಿ ನಿಗಧಿಪಡಿಸಿರುವ ಸೇವಾ ಪ್ರಮಾಣ ಪತ್ರದ ನಮೂನೆಯಲ್ಲಿ ಸೇವಾ ಅವಧಿಯ ವಿವರಗಳನ್ನು ಪಡೆದು, ಸದರಿ ಸೇವಾ ವಿವರಗಳನ್ನು ಆನ್‌ಲೈನ್ ಅರ್ಜಿಯಲ್ಲಿ ನಮೂದಿಸುವುದು. (ಮಾದರಿ ಸೇವಾ ಪ್ರಮಾಣ ಪತ್ರದ ನಮೂನೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ)

2. ಮೇಲೆ ತಿಳಿಸಿದ ಮಾನದಂಡಗಳನ್ನು ಅನುಸರಿಸಿ, ಅಭ್ಯರ್ಥಿಗಳು ಅರ್ಜಿಯಲ್ಲಿ ನೀಡಿರುವ ವಿದ್ಯಾರ್ಹತೆ ಮತ್ತು ಸೇವಾ ವಿವರಗಳ ಆಧಾರದ ಮೇಲೆ ರಾಜ್ಯವ್ಯಾಪಿ ಮೆರಿಟ್ ಪಟ್ಟಿಯನ್ನು ಸಿದ್ಧಪಡಿಸಲಾಗುವುದು.

3. ಮೆರಿಟ್ ಪಟ್ಟಿಯಲ್ಲಿನ ಅಭ್ಯರ್ಥಿಗಳಲ್ಲಿ ವಿಷಯವಾರು ಲಭ್ಯವಿರುವ ಕಾರ್ಯಭಾರಕ್ಕನುಗುಣವಾಗಿ ಅಗತ್ಯವಿರುವ ಅರ್ಹ ಅಭ್ಯರ್ಥಿಗಳ ರಾಜ್ಯವ್ಯಾಪಿ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗುವುದು.

4. ಅರ್ಹ ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳ ಆಯ್ಕೆ ಮಾಡಿಕೊಳ್ಳಲು ಅವಕಾಶ ನೀಡಲಾಗುವುದು. ಕೌನ್ಸಿಲಿಂಗ್ ಗೆ ಹಾಜರಾಗದೆ ಇರುವ ಅಭ್ಯರ್ಥಿಗಳಿಗೆ ಮತ್ತೊಮ್ಮೆ ಕೌನ್ಸಿಲಿಂಗ್ ಗೆ ಅವಕಾಶ ನೀಡಲಾಗುವುದಿಲ್ಲ.

5. ಒಂದು ವೇಳೆ ಅಭ್ಯರ್ಥಿಗಳು ತಪ್ಪು ಮಾಹಿತಿ ನೀಡಿದ್ದಲ್ಲಿ, ಅಂತಹ ಅಭ್ಯರ್ಥಿಗಳನ್ನು ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯಿಂದ ಅನರ್ಹಗೊಳಿಸಿ, ಅವರುಗಳ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು.

......3

6. ಆನ್‌ಲೈನ್ ಮೂಲಕ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುತ್ತಿರುವ ಕುರಿತು ಎಲ್ಲಾ ಸರ್ಕಾರಿ ಕಾಲೇಜುಗಳ ಪ್ರಾಂಶುಪಾಲರು ತಮ್ಮ ಕಾಲೇಜುಗಳ ನೋಟೀಸ್ ಬೋರ್ಡ್‌ನಲ್ಲಿ ಪ್ರಕಟಿಸುವುದರೊಂದಿಗೆ, ಅಭ್ಯರ್ಥಿಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಮಾಹಿತಿಯನ್ನು ನೀಡುವುದು.

7. ಅತಿಥಿ ಉಪನ್ಯಾಸಕರ ಆಯ್ಕೆಗೆ ಸಂಬಂಧಿಸಿದ ಎಲ್ಲಾ ಮಾಹಿತಿಗಳನ್ನು ಇಲಾಖೆಯ ಅಂತರ್ಜಾಲ ತಾಣ https://dce.karnataka.gov.in ರಲ್ಲಿ ಪ್ರಕಟಿಸಲಾಗುವುದು. ಆದ್ದರಿಂದ ಅಭ್ಯರ್ಥಿಗಳು ಸದರಿ ಅಂತರ್ಜಾಲ ತಾಣವನ್ನು ಪ್ರತಿನಿತ್ಯ ಗಮನಿಸಲು ತಿಳಿಸಲಾಗಿದೆ.

[redacted]ಮಾನ್ಯ ಆಯುಕ್ತರ ಆದೇಶದ ಮೇರೆಗೆ)

03/01/2023

**ಮುಖ್ಯ ಆಡಳಿತಾಧಿಕಾರಿಗಳು**

ಕಾಲೇಜು ಶಿಕ್ಷಣ ಇಲಾಖೆ

[redacted]ಇವರಿಗೆ,

1) ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು. – ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
4) ಕಛೇರಿ ಪ್ರತಿ.